ಕರ್ನಾಟಕ ಸರ್ಕಾರ

ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

# ರಾಜ್ಯ ನೀರು ಮತ್ತು ನೈರ್ಮಲ್ಯ ಮಿಷನ್

## ಸಂವಹನ ಮತ್ತು ಸಾಮರ್ಥ್ಯ ಅಭಿವೃದ್ಧಿ ಘಟಕ

ಸಂಖ್ಯೆ : ಗ್ರಾಅಪ/ರಾನೀನೈಮಿ/ನಿಭಾಅ/09/2012-133/667 ದಿನಾಂಕ : 24.03.2014

## ಸುತ್ತೋಲೆ

**ವಿಷಯ** : ನಿರ್ಮಲ ಭಾರತ್ ಅಭಿಯಾನ ಕಾರ್ಯಕ್ರಮದ ಅನುಷ್ಠಾನವನ್ನು ತೀವ್ರಗೊಳಿಸುವ ನಿಟ್ಟಿನಲ್ಲಿ ವೈಯಕ್ತಿಕ ಗೃಹ ಶೌಚಾಲಯಗಳ ನಿರ್ಮಿಸಿಕೊಂಡ ಫಲಾನುಭವಿಗಳ ಬ್ಯಾಂಕ್ ಖಾತೆಗೆ ನೇರವಾಗಿ RTGS ಮುಖಾಂತರ ಪ್ರೋತ್ಸಾಹಧನವನ್ನು ವರ್ಗಾಯಿಸುವ ಕುರಿತು.

**ಉಲ್ಲೇಖ** : ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಟಿಪ್ಪಣಿ ಸಂಖ್ಯೆ. ಗ್ರಾಅಪ/2014/2126 ದಿ.13.2014.

- - -

ಗ್ರಾಮೀಣ ಪ್ರದೇಶದಲ್ಲಿ ರೂಢಿಯಲ್ಲಿರುವ ಬಯಲು ಬಹಿರ್ದೆಸೆ ಪದ್ಧತಿಯನ್ನು ತೊಡೆದುಹಾಕುವ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಜಂಟಿಯಾಗಿ ನಿರ್ಮಲ ಭಾರತ್ ಅಭಿಯಾನ ಕಾರ್ಯಕ್ರಮವನ್ನು ರಾಜ್ಯದಾದ್ಯಂತ ಜಾರಿಗೆ ತಂದಿದ್ದು, ವೈಯಕ್ತಿಕ ಗೃಹ ಶೌಚಾಲಯಗಳನ್ನು ನಿರ್ಮಿಸಿಕೊಂಡ ರಾಜ್ಯದ ಗ್ರಾಮೀಣ ಕುಟುಂಬಗಳು ಬಿಪಿಎಲ್, ಎಪಿಎಲ್ (ಎ.ಪಿ.ಎಲ್ ಕುಟುಂಬಗಳು ಅಂದರೆ SCs/ST, Small and marginal farmers, landless labourers with homestead, physically handicapped and women headed households) ಕುಟುಂಬಗಳಿಗೆ ಕೇಂದ್ರ ಸರ್ಕಾರವು ಪ್ರತಿ ಶೌಚಾಯಲಕ್ಕೆ ರೂ.3200/- ಮತ್ತು ರಾಜ್ಯ ಸರ್ಕಾರ ರೂ.1500/- ಸೇರಿ ನಗದು ರೂ.4,700/- ನ್ನು 1.4.2012 ರಿಂದ ಅನ್ವಯವಾಗುವಂತೆ ನೀಡಲಾಗುತ್ತಿದೆ.

ನಿರ್ಮಲ ಭಾರತ್ ಅಭಿಯಾನ ಕಾರ್ಯಕ್ರಮವು ರಾಜ್ಯದಲ್ಲಿ ತ್ವರಿತಗತಿಯಲ್ಲಿ ಸಾಗುತ್ತಿದ್ದು, ಯೋಜನಾ ಅನುಷ್ಠಾನಕ್ಕಾಗಿ ಕೇಂದ್ರ ಹಾಗೂ ರಾಜ್ಯಸರ್ಕಾರಗಳು ಅನುದಾನವನ್ನು ಕೇಂದ್ರ ಕಛೇರಿಯ ಬ್ಯಾಂಕ್ ಖಾತೆಗೆ ಬಿಡುಗಡೆ ಮಾಡುತ್ತಿದ್ದು, ಅನುದಾನವನ್ನು ಜಿಲ್ಲಾ ಪಂಚಾಯತ್‌ಗಳ ಯೋಜನಾ ಬ್ಯಾಂಕ್ ಖಾತೆಗೆ ಆರ್.ಟಿ.ಜಿ.ಎಸ್.ಮುಖಾಂತರ ವರ್ಗಾಯಿಸಲಾಗುತ್ತಿದೆ. ಜಿಲ್ಲಾ ಪಂಚಾಯತ್‌ನಿಂದ ನೇರವಾಗಿ ಗ್ರಾಮ ಪಂಚಾಯತ್‌ಗಳಿಗೆ ಬಿಡುಗಡೆಯಾಗುತ್ತಿದ್ದು, ಕೆಲವು ಜಿಲ್ಲೆಗಳು ತಾಲ್ಲೂಕು ಪಂಚಾಯತ್‌ಗಳ ಮೂಲಕ ಗ್ರಾ..ಪಂ.ಗೆ ಅನುದಾನವನ್ನು ವರ್ಗಾಯಿಸಲಾಗುತ್ತಿದೆ.

ಅನೇಕ ಗ್ರಾಮ ಪಂಚಾಯತ್ ಮಟ್ಟದಲ್ಲಿ ವೈಯಕ್ತಿಕ ಶೌಚಾಲಯಗಳನ್ನು ನಿರ್ಮಿಸಿಕೊಂಡ ಫಲಾನುಭವಿಗಳಿಗೆ ಪ್ರೋತ್ಸಾಹಧನವನ್ನು ಚೆಕ್ ಮೂಲಕ ಪಾವತಿಸಲಾಗುತ್ತಿದ್ದು, ನಿಗಧಿತ ಸಮಯದೊಳಗೆ ಫಲಾನುಭವಿಗೆ ಪಾವತಿಯಾಗದೇ ವಿಳಂಭವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಇದರಿಂದ ಯೋಜನಾ ಪ್ರಗತಿ ಕುಂಠಿತವಾಗಿರುವುದಕ್ಕೆ ಕಾರಣವಾಗಿರುತ್ತದೆ. ಈ ನಿಟ್ಟಿನಲ್ಲಿ 2014-15ನೇ ಸಾಲಿನಿಂದ 2012 ರ ಬೇಸ್‌ಲೈನ್ ಸರ್ವೆಯಂತೆ ದಾಖಲಿಸಿರುವ ಫಲಾನುಭವಿಗಳಿಗೆ ಶೌಚಾಲಯ ನಿರ್ಮಿಸಿಕೊಂಡಿರುವುದನ್ನು ಖಾತ್ರಿಯಾದ ಕೂಡಲೇ ಬ್ಯಾಂಕ್ ಖಾತೆಗೆ ನೇರವಾಗಿ eFMS ಮುಖಾಂತರ ಪ್ರೋತ್ಸಾಹಧನವನ್ನು ವರ್ಗಾಯಿಸಲು ಕ್ರಮಕೈಗೊಳ್ಳಲಾಗುವುದು.

ಮು.ತಿ.ನೋ

ಅಭಿಯಾನ ಕಾರ್ಯಕ್ರಮವನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸುವ ಹಿನ್ನೆಲೆಯಲ್ಲಿ ಪ್ರಸ್ತುತ ಚೆಕ್ ಪಾವತಿಯನ್ನು ಸ್ಥಗಿತಗೊಳಿಸಬೇಕಾಗಿರುತ್ತದೆ. 2014-15ನೇ ಸಾಲಿನಿಂದ ಫಲಾನುಭವಿಗಳ ಬ್ಯಾಂಕ್ ಖಾತೆಯ ವಿವರವನ್ನು ಕಡ್ಡಾಯವಾಗಿ ಅರ್ಜಿಗಳಲ್ಲಿ ಪಡೆಯಲು ಜಿಲ್ಲಾ ಪಂಚಾಯತ್‌ನಿಂದ ಗ್ರಾಮ ಪಂಚಾಯತಿಗಳಿಗೆ ಸೂಕ್ತ ನಿರ್ದೇಶನ ನೀಡುವಂತೆ ಸೂಚಿಸಲಾಗಿದೆ.

ಈ ನಿಟ್ಟಿನಲ್ಲಿ eFMS ವ್ಯವಸ್ಥೆ ಜಾರಿಗೆ ಬರುವವರೆಗೆ, ಏಪ್ರಿಲ್ 1, 2014 ರಿಂದ ಜಾರಿಗೆ ಬರುವಂತೆ ಫಲಾನುಭವಿಗಳಿಗೆ ನೀಡುವಂತಹ ಪ್ರೋತ್ಸಾಹಧನವನ್ನು ಮುಂದಿನ ಆದೇಶದವರೆಗೆ ಕಡ್ಡಾಯವಾಗಿ RTGS ಮುಖಾಂತರವೇ ನಿಯಾಮಾನುಸಾರ ಪಾವತಿಸಬೇಕೆಂದು ನಿರ್ದೇಶಿಸಿದೆ.

**ಮಿಷನ್ ನಿರ್ದೇಶಕರ ಪರವಾಗಿ**
ರಾ.ನೀ.ನೈ.ಸಂಸ್ಥೆ ಹಾಗೂ ಪದನಿಮಿತ್ತ
ಸರ್ಕಾರದ ಉಪ ಕಾರ್ಯದರ್ಶಿಗಳು,
ಗ್ರಾ ಅ ಮತ್ತು ಪಂಚಾಯತ್ ರಾಜ್ ಇಲಾಖೆ

**ಮುಂದಿನ ಕ್ರಮಕ್ಕಾಗಿ :**
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಎಲ್ಲಾ ಜಿಲ್ಲಾ ಪಂಚಾಯತ್‌ಗಳು

**ಮಾಹಿತಿಗಾಗಿ :**

1. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳ ಆಪ್ತಕಾರ್ಯದರ್ಶಿಗಳು, ಗ್ರಾ.ಅ.ಪಂ.ರಾಜ್ ಇಲಾಖೆ.
2. ಮಾನ್ಯ ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು ಇವರಿಗೆ ಸಚಿವರ ಗಮನಕ್ಕೆ ತರಲು ಸಲ್ಲಿಸಿದೆ.

2ನೇ ಮಹಡಿ, ಕೆ.ಹೆಚ್.ಬಿ. ಬಿಲ್ಡಿಂಗ್, ಕಾವೇರಿಭವನ, ಬೆಂಗಳೂರು - 560 009.
ದೂರವಾಣಿ ಸಂ.22221861 : - ಫ್ಯಾಕ್ಸ್ :-22221862 E-mail : wsrdpr@gmail.com